# ಕರ್ನಾಟಕ ವಿಧಾನಪರಿಷತ್ತು

## ನೂರ ನಲವತ್ತ ಮೂರನೆಯ ಅಧಿವೇಶನದ ಮುಂದುವರೆದ ಉಪವೇಶನ

## ಚುಕ್ಕೆ ಗುರುತಿನ ಪ್ರಶ್ನೆ

ದಿನಾಂಕ : 05-03-2021 ಪ್ರಶ್ನೆ ಸಂಖ್ಯೆ : 108 (756)

ಸದಸ್ಯರ ಹೆಸರು ಮತ್ತು ಕ್ಷೇತ್ರ : ಶ್ರೀ ಎಂ.ಎ. ಗೋಪಾಲಸ್ವಾಮಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ)

ಉತ್ತರ ನೀಡಬೇಕಾದ ದಿನಾಂಕ : 05-03-2021

ಉತ್ತರಿಸುವ ಸಚಿವರು : ಕೃಷಿ ಸಚಿವರು

ವಿಷಯ : ಅಕಾಲಿಕವಾಗಿ ಸುರಿದ ಆಲಿಕಲ್ಲು ಮಳೆಯಿಂದ ಆಗಿರುವ ಬೆಳೆ ನಷ್ಟದ ಬಗ್ಗೆ

(ಅ) ಫೆಬ್ರುವರಿ-2021ರ ಮಾಹೆಯಲ್ಲಿ ಅಕಾಲಿಕವಾಗಿ ಸುರಿದ ಆಲಿಕಲ್ಲು ಮಳೆಗೆ ಹಾಸನ ಜಿಲ್ಲೆಯಲ್ಲಿ ಸಾವಿರಾರು ಹೆಕ್ಟೇರ್ ಪ್ರದೇಶದ ಕೃಷಿ ಬೆಳೆಗಳು ನಾಶವಾಗಿ ರೈತರು ಸಂಕಷ್ಟದಲ್ಲಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ನಾಶವಾಗಿರುವ ಬೆಳೆಗಳ ಸಮೀಕ್ಷೆ ನಡೆಸಲಾಗಿದೆಯೇ ; (ವಿವರ ನೀಡುವುದು)

(ಆ) ಈ ಆಲಿಕಲ್ಲು ಮಳೆಗೆ ಹಾಸನ ಜಿಲ್ಲೆಯಲ್ಲಿ ಯಾವ ಯಾವ ಕೃಷಿ ಬೆಳೆಗಳು ನಾಶವಾಗಿವೆ ; ಇವುಗಳ ಪ್ರಮಾಣವೆಷ್ಟು ; ನಷ್ಟದ ಅಂದಾಜು ಮೊತ್ತವೆಷ್ಟು; (ತಾಲ್ಲೂಕುವಾರು ಮಾಹಿತಿ ನೀಡುವುದು)

(ಇ) ಈ ಮಳೆಯಿಂದ ಬೆಳೆ ನಷ್ಟ ಹೊಂದಿರುವ ರೈತರಿಗೆ ಪರಿಹಾರ ನೀಡಲು ಸರ್ಕಾರವು ಯಾವ ಕ್ರಮ ಕೈಗೊಂಡಿದೆ ; ಹಾಗಿದ್ದಲ್ಲಿ, ಯಾವ ಯಾವ ಬೆಳೆಗಳಿಗೆ ಎಷ್ಟು ಪರಿಹಾರ ನೀಡಲಾಗಿದೆ? (ವಿವರ ನೀಡುವುದು)